ಮಂಗಳವಾರ 30–09–2025 ಬೆಂಗಳೂರು ಬೆಲೆ: 5ರೂ, 4ಪುಟಗಳು ಸಂಪುಟ 01–ಸಂಚಿಕೆ 66 Digital Varthe Kannada Daily Volume 01 - Issue 66 Tuesday 30-09-2025 Price: 5/- Rs 2 Pages Bengalore

DIGITAL VARTHE
www.digitalvarthe.com
digitalvarthe@gmail.com

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು
ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು
RNI:KNKAN/25/A1348
ಕನ್ನಡ ದಿನಪತ್ರಿಕೆ

## ಸಮೀಕ್ಷೆ ಕುರಿತು ಬಿಜೆಪಿ ಅಪಪ್ರಚಾರ ನಡೆಸುತ್ತಿದೆ :ಬಿ.ಕೆ.ಹರಿಪ್ರಸಾದ್ ಆರೋಪ



ಬೆಂಗಳೂರು: ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ನಡೆದು ವರದಿ ಜಾರಿಯಾದರೆ, ಅವಕಾಶ ವಂಚಿತರು, ತುಳಿತಕ್ಕೊಳಗಾದವರು ಮುನ್ನೆಲೆಗೆ ಬರುತ್ತಾರೆಂಬ ಆತಂಕದಿಂದ ಕೆಲವರು ಅಪಪ್ರಚಾರ ಮಾಡಿ ಜನರನ್ನು ದಾರಿ ತಪ್ಪಿಸುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಕಾಂಗ್ರೆಸ್‌ನ ಹಿರಿಯ ನಾಯಕ ಹಾಗೂ ವಿಧಾನಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್ ಆರೋಪಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಜಾತಿ ಜನಗಣತಿ ಮಾಡುತ್ತಿಲ್ಲ. ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆ ನಡೆಸುತ್ತಿದೆ. ಕೇಂದ್ರ ಸಚಿವರು, ಬಿಜೆಪಿಯ ಸಂಸದರು ಸೇರಿದಂತೆ ಆ ಪಕ್ಷದ ನಾಯಕರು ಅನಾರೋಗ್ಯದ ಮನಸ್ಸಿನಿಂದ ಟೀಕೆ ಮಾಡುತ್ತಿದ್ದಾರೆ ಎಂದು ತಿರುಗೇಟು ನೀಡಿದರು. ಬಿಜೆಪಿಯ ಪಿತೃಪಕ್ಷ ಆರ್‌ಎಸ್‌ಎಸ್ ಹಿಂದುಳಿದ ವರ್ಗ, ಶೂದ್ರರು ಮತ್ತು ಪಂಚಮರ ಏಳಿಗೆಗೆ ಎಂದೂ ಶ್ರಮಿಸಿಲ್ಲ. ಶೋಷಿತರನ್ನು ಕಾಲಾಳುಗಳನ್ನಾಗಿ ಬಳಸಿಕೊಂಡಿದೆ. ಅವ–ರಿಗೆ ಸೌಲಭ್ಯಗಳು ಸಿಕ್ಕಿ ಸ್ವಾವಲಂಬಿಗಳಾದರೆ, ಕೋಮುವಾದಿಗಳಿಗೆ ಜಾತಿ ಹಾಗೂ ಧರ್ಮದ ಹೆಸರಿನಲ್ಲಿ ಆಟವಾಡಲು ಸಾಧ್ಯವಾಗುವುದಿಲ್ಲ. ಈ ಅನಾರೋಗ್ಯಕರ ಮನಸ್ಸಿನಿಂದ ವಿರೋಧ ಮಾಡುತ್ತಿದ್ದಾರೆ ಎಂದು ಹೇಳಿದರು. ಇಡಬ್ಲ್ಯೂಎಸ್ ಜಾರಿಯಾಗಿ 7 ವರ್ಷವಾಗಿದೆ.

ಕರ್ನಾಟಕದಲ್ಲಿ ಮೇಲ್ಜಾತಿ ಎನಿಸಿಕೊಂಡಿರುವವರು ಮೀಸಲಾತಿಯ ವ್ಯಾಪ್ತಿಯಲ್ಲಿ ಬರುತ್ತಿಲ್ಲ. ಇಡಬ್ಲ್ಯೂಎಸ್‌ಗೆ ರಾಜ್ಯದಲ್ಲಿ ಅವಕಾಶವಿಲ್ಲ. ಅವಕಾಶ ವಂಚಿತ ಸಮುದಾಯಗಳು ಮುನ್ನೆಲೆಗೆ ಬರಬಹುದು ಎಂಬ ದುಗುಡದಿಂದ ನಾನಾ ರೀತಿಯ ತಪ್ಪು ವ್ಯಾಖ್ಯಾನ ಮಾಡಲಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.
ಜಾತಿ ಅಥವಾ ಜನಗಣತಿ ಮಾಡಲು ಕೇಂದ್ರ ಸರ್ಕಾರದ ರಿಜಿಸ್ಟಾರ್ ಆಫ್ ಸರ್ವೇಯವರಿಗೆ ಮಾತ್ರ ಅವಕಾಶವಿದೆ ಎಂಬುದು ಕೇಂದ್ರ ಸಚಿವರಿಗೆ, ಸಂಸದರಿಗೆ ಅರಿವಿಲ್ಲ. ರಾಜ್ಯ ಸರ್ಕಾರ ಹಿಂದುಳಿದ ವರ್ಗಗಳ ಆಯೋಗದಿಂದ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ನಡೆಸುತ್ತಿದೆ ಎಂದರು.
ಈ ಆಯೋಗ ಸುಪ್ರೀಂಕೋರ್ಟಿನ ಅದೇಶದ ಮೇರೆಗೆ ರಚನೆಯಾಗಿದೆ.

ಅದರ ಜವಾಬ್ದಾರಿಗಳಲ್ಲಿ 10 ವರ್ಷಕ್ಕೊಮ್ಮೆ ಸಮೀಕ್ಷೆ ನಡೆಸಿ, ಹಿಂದುಳಿದ ವರ್ಗಗಳ ಸ್ಥಿತಿಗತಿ ತಿಳಿದುಕೊಳ್ಳಬೇಕೆಂಬ ನಿಯಮವಿದೆ. ಮೂರ್ಖ ಶಿಖಾಮಣಿಗಳಿಗೆ ಇದು ತಿಳಿಯುತ್ತಿಲ್ಲ ಎಂದರು.
ಸಮೀಕ್ಷೆ ಹಂತದಲ್ಲಿನ ಲೋಪಗಳನ್ನು ಸರಿಪಡಿಸಲು ಈಗಾಗಲೇ ಸರ್ಕಾರ ಕ್ರಮಕೈಗೊಂಡಿದ್ದು, ತೀವ್ರಗತಿಯಲ್ಲಿ ಕಾರ್ಯಾಚರಿಸುತ್ತಿದೆ. ಅ. 7ರ ವೇಳೆಗೆ ಸಮೀಕ್ಷೆ ಪೂರ್ಣಗೊಳ್ಳಲಿದೆ ಎಂದರು.
ಪ್ರಜಾಪ್ರಭುತ್ವದಲ್ಲಿ ಯಾವ ಸಮುದಾಯವಾದರೂ ಮೀಸಲಾತಿ ಪಟ್ಟಿಗೆ ಸೇರಲು ಅವಕಾಶ ಇದೆ. ಆದರೆ ಪರಿಶಿಷ್ಟ ಪಂಗಡದ ವ್ಯಾಪ್ತಿಗೆ ಕುರುಬ ಸಮುದಾಯವನ್ನು ಸೇರಿಸಲು ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿರುವ ಪರಿಶಿಷ್ಟ ಪಂಗಡಗಳು ಪರಾಮರ್ಶೆ ನಡೆಸಬೇಕು. ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಬೇಕು. ನಂತರ ಸಂಸತ್‌ನಲ್ಲಿ ಚರ್ಚೆ ಮಾಡಿ, ಸೂಕ್ತ ತೀರ್ಮಾನ ತೆಗೆದುಕೊಳ್ಳಬೇಕು. ಇದೆಲ್ಲಾ ಅಷ್ಟು ಸುಲಭದ ವಿಚಾರ ಅಲ್ಲ ಎಂದರು.

## ನೆರೆ ಸಂತ್ರಸ್ತರ ನಿರ್ಲಕ್ಷ :ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಆಕ್ರೋಶ

ಬೆಂಗಳೂರು: ಕಲ್ಯಾಣ ಕರ್ನಾಟಕ ಹಾಗೂ ಕಿತ್ತೂರು ಕರ್ನಾಟಕ ಭಾಗದ 8ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ಕಳೆದ ಒಂದು ವಾರದಿಂದ ಸುರಿಯುತ್ತಿರುವ ಮಹಾಮಳೆಗೆ ಜನಜೀವನ ಅಸ್ತವ್ಯಸ್ತವಾಗಿದ್ದು, ರಾಜ್ಯ ಸರ್ಕಾರ ಸಂಪೂರ್ಣವಾಗಿ ನಿರ್ಲಕ್ಷ್ಯ ಮಾಡಿದೆ ಎಂದು ರಾಜ್ಯ ಬಿಜೆಪಿ ಘಟಕ ಕಿಡಿಕಾರಿದೆ.
ಕಲಬುರಗಿ, ಬೀದರ್, ರಾಯಚೂರು, ಯಾದಗಿರಿ ಸೇ–ರಿದಂತೆ ಮಳೆ ಪೀಡಿತ ಪ್ರದೇಶಗಳಿಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ನೇತೃತ್ವದ ಎರಡು ತಂಡ ಮಳೆ ಪೀಡಿತ ಪ್ರದೇಶಗಳಲ್ಲಿ ಪ್ರವಾಹ ಪರಿಸ್ಥಿತಿಯ ಪರಿಶೀಲನೆ ನಡೆಸಿ ಸರ್ಕಾರದ ವೈಫಲ್ಯವನ್ನು ತೀವ್ರವಾಗಿ ಖಂಡಿಸಿದರು.

ಒಂದು ಕಡೆ ಮುಂಗಾರು ಅವಧಿ ಪೂರ್ಣಗೊಳ್ಳುತ್ತಿದ್ದು, ಇನ್ನೊಂದೆಡೆ ಅತಿವೃಷ್ಟಿ, ಮತ್ತೊಂದೆಡೆ ಮಹಾರಾಷ್ಟ್ರದಿಂದ ಹರಿದು ಬರುತ್ತಿರುವ ನೀರಿನಿಂದ ಪ್ರವಾಹ ಪರಿಸ್ಥಿತಿ ತಲೆದೋರಿದೆ. ಆದರೂ ರಾಜ್ಯ ಸರ್ಕಾರ ಸೂಕ್ತ ಕ್ರಮಗಳನ್ನು ಕೈಗೊಂಡಿಲ್ಲ ಎಂದು ಬಿಜೆಪಿ ಆರೋಪಿಸಿದೆ.
ಕಳೆದ ಒಂದು ವಾರದಿಂದ ನಿರಂತರವಾಗಿ ಮಳೆಯಾಗುತ್ತಿದ್ದು, ಅನೇಕ ಕಡೆ ಸಾವುನೋವು ಉಂಟಾಗಿದೆ. ಕೆಲವು ಕಡೆ ಮನೆಗಳು ಕುಸಿದು ಬಿದ್ದಿದ್ದು ನೂರಾರು ಜನ ನಿರಾಶ್ರಿತರಾಗಿದ್ದಾರೆ. ಶಾಲೆಗಳು, ಅಂಗನವಾಡಿ ಕೇಂದ್ರಗಳು ಸಹ ಕುಸಿದು ಬಿದ್ದಿವೆ.
ಕನಿಷ್ಟಪಕ್ಷ ಸೌಜನ್ಯಕ್ಕಾದರೂ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು, ಸಂಸದರು ಸಂತ್ರಸ್ತರನ್ನು ಭೇಟಿ



ಮಾಡಿ ಕಷ್ಟಸುಖ ವಿಚಾರಿಸಿಲ್ಲ.

ಸರ್ಕಾರ ಗಾಢ ನಿದ್ರೆಯಲ್ಲಿದ್ದು, ಎಚ್ಚೆತ್ತುಕೊಳ್ಳುವ ಕೆಲಸವನ್ನು ಪ್ರತಿಪಕ್ಷ ಮಾಡುತ್ತದೆ ಎಂದು ಬಿಜೆಪಿ ಹೇಳಿದೆ.
ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ, ಸರ್ಕಾರ ಮಳೆ ಪೀಡಿತ ಪ್ರದೇಶಗಳನ್ನು ನಿರ್ಲಕ್ಷ್ಯ ಮಾಡಿದೆ. ಪ್ರತಿಯೊಂದಕ್ಕೂ ಕೇಂದ್ರ ಸರ್ಕಾರದತ್ತ ಬೊಟ್ಟು ಮಾಡಿ ತನ್ನ ಜವಾಬ್ದಾರಿಯಿಂದ ನುಣುಚಿಕೊಳ್ಳುತ್ತಿದೆ. ಜಿಲ್ಲಾಧಿಕಾರಿಗಳ ಖಜಾನೆಯಲ್ಲಿರುವ ಹಣವನ್ನು ಬಳಸಿಕೊಳ್ಳುವಂತೆ ಮುಖ್ಯಮಂತ್ರಿಗಳು ಸೂಚನೆ ಕೊಡಬೇಕು. ಪ್ರತಿಯೊಂದಕ್ಕೂ ಕೇಂದ್ರ ಸರ್ಕಾರದ ಕಡೆ ಬೊಟ್ಟು ಮಾಡುವುದು ಸರಿಯಲ್ಲ. ಎಲ್ಲದಕ್ಕೂ ಕೇಂದ್ರದ ಕಡೆ ಬೆರಳು ತೋರಿದರೆ ಸರ್ಕಾರ ದಿವಾಳಿಯಾಗಿದೆಯೇ ಎಂದು ಪ್ರಶ್ನೆ ಮಾಡಿದರು.

ಪ್ರವಾಸ ತಂಡಗಳು ತಂಡ–1: ಬಿ.ವೈ.ವಿ–ಜಯೇಂದ್ರ, ಮೇಲನೆ ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ, ಸಂಸದ ಗೋವಿಂದ ಕಾರಜೋಳ, ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ, ಮಾಜಿ ಸಚಿವ ಬಿ.ಶ್ರೀರಾಮುಲು, ಮಾಜಿ ಸಂಸದ ಉಮೇಶ್ ಜಾಧವ್, ಮೇಲನೆ ಸದಸ್ಯೆ ಭಾರತಿ ಶೆಟ್ಟಿ, ರೈತ ಮೋರ್ಚಾ ಅಧ್ಯಕ್ಷ ಎ.ಎಸ್. ಪಾಟೀಲ್ ನಡಹಳ್ಳಿ ಅವರು ಒಂದು ತಂಡವಾಗಿ ರಾಯಚೂರು, ಯಾದಗಿರಿ, ಕಲಬುರಗಿ, ಬೀದರ್ ಜಿಲ್ಲೆಗಳಿಗೆ ಭೇಟಿ ನೀಡಲಿದ್ದಾರೆ. ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ.ರಾಜೀವ್ ಸಂಯೋಜಕರಾಗಿ ಕಾರ್ಯನಿರ್ವಹಿಸಲಿದ್ದಾರೆ.

## ಸಂತ್ರಸ್ತರ ನೆರವಿಗೆ ಸರ್ಕಾರ ಅವಿರತ ಪ್ರಯತ್ನ ನಡೆಯುತ್ತಿದೆ :ಪ್ರಿಯಾಂಕ ಖರ್ಗೆ

ಬೆಂಗಳೂರು: ಮಹಾರಾಷ್ಟ್ರದಲ್ಲಿ ಸುರಿಯುತ್ತಿರುವ ಭಾರೀ ಮಳೆಯಿಂದಾಗಿ ಕಲಬುರಗಿ, ಯಾದಗಿರಿ, ವಿಜಯಪುರ ಜಿಲ್ಲೆಯ ಭೀಮಾನದಿ ಭಾಗದ ಹಲವು ಪ್ರದೇಶಗಳು ಮುಳು ಗಡೆಯಾಗಿದ್ದು, ಜನರ ಪುನರ್ ವಸತಿಗೆ ಸರ್ಕಾರ ಅವಿರತ ಪ್ರಯತ್ನ ನಡೆಯುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಪ್ರಿಯಾಂಕ ಖರ್ಗೆ ತಿಳಿಸಿದ್ದಾರೆ.


ತಮ ಸಾಮಾಜಿಕ ಜಾಲತಾಣದಲ್ಲಿ ಸಂತ್ರಸ್ಥ ಪ್ರದೇಶಗಳ ಡ್ರೋನ್ ವಿಡಿಯೋಗಳನ್ನು ಹಂಚಿಕೊಂಡಿರುವ ಅವರು, ಕರ್ನಾಟಕದ ಭೀಮಾ ಜಲಾಶಯ ಪ್ರದೇಶಗಳಲ್ಲಿನ ಜಿಲ್ಲೆಗಳ ಪರಿಸ್ಥಿತಿ ಸವಾಲಿನದ್ದಾಗಿದೆ. ನಿರಂತರ ಮಳೆ ಹಾಗೂ ಉಕ್ಕಿ ಹರಿಯುತ್ತಿರುವ ನದಿಗಳಿಂದಾಗಿ ಹಲವಾರು ಗ್ರಾಮಗಳು ಜಲಾವೃತಗೊಂಡಿವೆ, ರಸ್ತೆ ಸಂಪರ್ಕ ಕಡಿತಗೊಂಡಿವೆ ಎಂದು ತಿಳಿಸಿದ್ದಾರೆ.
ಜೀವಗಳ ರಕ್ಷಣೆ ಸರ್ಕಾರದ ಮೊದಲ ಆದ್ಯತೆ.



ಸುಮಾರು 8 ಸಾವಿರ ಜನರನ್ನು ಈಗಾಗಲೇ ಸ್ಥಳಾಂತರಿಸಲಾಗಿದೆ. ಆಹಾರ, ನೀರು, ವೈದ್ಯಕೀಯ ಆರೈಕೆ ಒದಗಿಸಲಾಗುತ್ತಿರುವ ಪರಿಹಾರ ಕೇಂದ್ರಗಳಲ್ಲಿ ಅವರು ರಕ್ಷಣೆ ಪಡೆದಿದ್ದಾರೆ.

ಜಾನುವಾರುಗಳನ್ನು ರಕ್ಷಿಸಲು ಮತ್ತು ಜೀವನೋಪಾಯಕ್ಕೆ ಹಾನಿ ಕಡಿಮೆ ಮಾಡಲು ಎಸ್‌ಡಿಆರ್‌ಎಫ್ ಹಾಗೂ ಎಲ್ಲಾ ಇಲಾಖೆಗಳು ಹಗಲಿರುಳು ಶ್ರಮಿಸುತ್ತಿವೆ ಎಂದು ತಿಳಿಸಿದ್ದಾರೆ.
ಜನ ಜೀವನ ಸಹಜ ಸ್ಥಿತಿಗೆ ಬರುವವರೆಗೂ ಸಾಧ್ಯವಿರುವ ಎಲ್ಲಾ ಪ್ರಯತ್ನಗಳನ್ನು ಮಾಡಿ ಅಗತ್ಯ ಸಂಪನೂಲಗಳನ್ನು ಒದಗಿಸಲಾಗುವುದು.

## ಗ್ರಾಮೀಣಾಭಿರುದ್ಧಿಗಾಗಿ ಯುವ ಜನರನ್ನು ಒಗ್ಗೂಡಿಸಿ



**ಯುವ ಜನರು ದೇಶದ ಭವಿಷ್ಯ ದ ನಾಯಕರು ಗ್ರಾಮೀಣ ಪ್ರದೇಶ ಯುವ ಜನಾಂಗವನ್ನು ಮುಖ್ಯವಾಹಿನಿಗೆ ಬರುವಂತಹ ಕ್ರಿಯಾಯೋಜನೆ ಯ ತರಬೇತಿಗಳನ್ನು ರೂಪಿಸಬೇಕು ಆಗ ಮಾತ್ರ ಗ್ರಾಮ ಮತ್ತು ದೇಶದ ಅಭಿರುದ್ದಿಯಗಳು ಸಾಧ್ಯ ವಾಗುತ್ತೆ.**
**ಆನಂದ್ ಸಿ ತಿರುಮಲ**
**ರಾಜ್ಯ ಪ್ರಶಸ್ತಿ ವಿಜೇತರು.**

ಬೆಂಗಳೂರು: ಜನಸೇವೆಗಾಗಿ ಶ್ರಮಿಸುವ ಯುವ ಜನಾಂಗ ಗ್ರಾಮಗಳ ಅಭಿರುದ್ದಿಗಾಗಿ ಕೈಜೋಡಿಸಿ ಎಂದು ವಿಶ್ವ ಗ್ರಾಮೋದಯ ಟ್ರಸ್ಟ್ ನ ಸಂಸ್ಥಾಪಕ ಅಧ್ಯಕ್ಷ ದಾಸಣ್ಣ ಪಾವಗಡ ಹೇಳಿದರು. ಅವರು ಬೆಂಗಳೂರಿನಲ್ಲಿ ಕೇಂದ್ರ ಕಚೇರಿ ಯಲ್ಲಿ ಆಯೋಜಿಸಿದ ವಿಶ್ವ ಗ್ರಾಮೋದಯ ಟ್ರಸ್ಟ್ ನ ಪೂರ್ವ ಭಾವಿ ಸಭೆಯಲ್ಲಿ ಮಾತನಾಡಿ ಕಳೆದ 18 ವರ್ಷಗಳಿಂದ ಗ್ರಾಮೀಣಾಭಿರುದ್ಧಿ ಯಲ್ಲಿ ಮುಖ್ಯವಾಗಿ ಯುವ ಜನರನ್ನು ಒಗ್ಗೂಡಿಸಿಕೊಂಡು ಅನೇಕ ಕಾರ್ಯಕ್ರಮಗಳನ್ನು ರೂಪಿಸಿಕೊಂಡು ಬಂದಿದ್ದು ಆನೇಕ ಗ್ರಾಮೀಣ ಪ್ರದೇಶ ಜನರಿಗೆ ಜನ ಪರ ಕಾರ್ಯಕ್ರಮಗಳನ್ನು ಆಯೋಜಿಸಿಕೊಂಡು ಬಂದಿದ್ದೆ ಈ ನಿಟ್ಟಿನಲ್ಲಿ ಮುಂದಿನ ದಿನಗಲ್ಲಿ ಇನ್ನು ಹೆಚ್ಚಿನ ಜನರಿಗೆ ನಮ್ಮ ಸೇವೆಯನ್ನು ತಲುಪಿಸಬೇಕು ಎಂದು ಹೇಳಿದರು.

ಯುವ ನಾಯಕ ಲಯನ್ ಶ್ರೀಧರ್ ಮಾತನಾಡಿ ಸಮಾಜ ಸೇವೆಗಾಗಿ ಅನೇಕ ಕಾರ್ಯಕ್ರಮಗಳನ್ನು ಆಯೋಜಿಸಿಕೊಂಡು ಬಂದಿದ್ದು ಟ್ರಸ್ಟಿನ ಕಾರ್ಯಕ್ರಮಗಳನ್ನು ಪ್ರತಿ ಜಿಲ್ಲೆಯ ಎಲ್ಲಾ ತಾಲೂಕುಗಳಿಗೆ ತಲುಪಿಸಬೇಕು ಯುವ ಜನರನ್ನು ಸಮಾಜ ಸೇವೆಗೆ ತೊಡಗಿಸಿಕೊಂಡು ಭವಿಷ್ಯದಲ್ಲಿ ಉನ್ನತ ಮಟ್ಟದಲ್ಲಿ ಶಕ್ತಿ ತುಂಬುವ ಕೆಲಸ ಮಾಡಬೇಕು ಎಂದು ಹೇಳಿದರು. ಯುವ ಮುಖಂಡ ಸಂಘಮೇಶ್ ರವರು ಮಾತನಾಡಿ ಟ್ರಸ್ಟಿನ ಅಭಿರುದ್ದಿ ಗಾಗಿ ಗ್ರಾಮೀಣ ಪ್ರದೇಶದ ಜನ–ರಿಗೆ ಸೂಕ್ತ ಅವಕಾಶಗಳು ಕೊಡಬೇಕು ಸರ್ಕಾರದಿಂದ ಸಿಗುವ ಸೌಲಭ್ಯ ಗಳು ಬಡ ಜನರಿಗೆ ತಲುಪಿಸುವುದು ಬಹಳ ಮುಖ್ಯ ವಾಗಿದೆ ಎಂದು ಹೇಳಿದರು ಸಭೆಯಲ್ಲಿ ವಿಶ್ವ ಗ್ರಾಮೋದಯ ಟ್ರಸ್ಟ್ ನ ಅಧ್ಯಕ್ಷ ಮಹೇಶ್, ಲಯನ್ ಶ್ರೀಧರ್,ಯುವ ಬ್ರಿಗೇಡ್ ನ ಮುನಿಕುಮಾರ್, ರಾಜ್ಯ ಪ್ರಶಸ್ತಿ ವಿಜೇತ ಆನಂದ್ ಸಿ ತಿರುಮಲ, ಸಂಗಮೇಶ್,ಗುರುಮೂರ್ತಿ, ರಂಗನಾಥ್ ಪತ್ರೊಟಿ. ಸೇರಿದರು.

## ಸೇವಾ ಮನೋಭಾವನೆಯನ್ನು ಬೆಳೆಸುವಲ್ಲಿ ಎನ್.ಎಸ್.ಎಸ್ ಶಿಬಿರಗಳು ಸಹಕಾರಿಯಾಗಲಿದೆ ಎಂದು ನಗರಸಭೆ ಅಧ್ಯಕ್ಷ ಎನ್.ಗಣೇಶ್ ಅಭಿಪ್ರಾಯ ಪಟ್ಟರು

ನೆಲಮಂಗಲ: ನಗರಸಭೆ ವ್ಯಾಪ್ತಿಯ ಬಸವನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮುರುಳಿ ಪದವಿಪೂರ್ವ ಕಾಲೇಜು ಆಯೋಜಿಸಿದ್ದ ಎನ್.ಎಸ್.ಎಸ್. ಶಿಬಿರದ ಸಮಾರೋಪ ಸಮಾರಂಭ ಉದ್ದೇಶಿಸಿ ಮಾತನಾಡಿದರು. ಶಿಬಿರಗಳಲ್ಲಿ ಕಳೆದ ಸಮಯ ಮಾಡಿದ ಸೇವಾ ಕಾರ್ಯಗಳು ಭವಿಷ್ಯದ ಜೀವನದಲ್ಲಿ ಸದಾ ಸ್ಮರಣೀಯವಾಗಿ ಉಳಿಯಲಿದೆ. ನಗರಸಭೆಯಿಂದ ಮಾಡಬೇಕಾದ ಕೆಲಸಗಳನ್ನು ಶಿಬಿರಾರ್ಥಿಗಳು ಮಾಡಿರುವುದು ಸಂತೋಷಕರ ಸಂಗತಿ. ಜನಸಾಮಾನ್ಯರಲ್ಲಿ ಸ್ವಚ್ಚತೆ ಹಾಗೂ ಸೇವಾ ಕಾರ್ಯಗಳ ಅರಿವು ಮೂಡಿಸಲು ಸಹಕಾರಿಯಾಗಲಿದೆ ಎಂದರು.



ಮಾಜಿ ಸೈನಿಕ ಮಿಲಿಟರಿಮೂರ್ತಿ ಮಾತನಾಡಿ ವಿದ್ಯಾರ್ಥಿಗಳು ವೈಯಕ್ತಿಕ ಶಿಸ್ತು ಕುಟುಂಬದಲ್ಲಿನ ಪಾಲಕರು ಗುರುಹಿರಿಯರಿಗೆ ಗೌರವ ಕೊಡಬೇಕು. ಪಠ್ಯದ ವಿಷಯಗಳನ್ನು ಚೆನ್ನಾಗಿ ಅಧ್ಯಯನ ಮಾಡಬೇಕು. ಕಷ್ಟಪಟ್ಟು ಅಧ್ಯಯನ ಮಾಡಿದಲ್ಲಿ ಭವಿಷ್ಯದಲ್ಲಿ ಸುಖ ಶಾಂತಿ ಸಮೃದ್ದಿಯಿಂದ ಬದುಕಬಹುದಾಗಿದೆ. ಇಲ್ಲವಾದಲ್ಲಿ ಅಂದಕೊಂಡಂತೆ ಬದುಕಲು ಆಗುವುದಿಲ್ಲ. ಸಮಯ ವ್ಯರ್ಥ ಮಾಡಬೇಡಿ. ಭಾರತೀಯ ಇತಿಹಾಸ, ಸಂಸ್ಕೃತಿಯನ್ನು ತಿಳಿದುಕೊಳ್ಳಬೇಕು. ಸ್ಪರ್ಧಾತ್ಮಕ ಜಗತ್ತಿಗೆ ಅಣಿಯಾಗುವ ಬಹುದೊಡ್ಡ ಜವಬ್ದಾರಿ ಪ್ರತಿಯೊಬ್ಬ ವಿದ್ಯಾರ್ಥಿ ಮೇಲಿದೆ. ಇಂಜಿನಿಯರಿಂಗ್, ಮೆಡಿಕಲ್ ಓದಲು ಕೋಟಿ ಕೋಟಿ ಹಣ ಬೇಕಿದೆ. ಪಾಲಕರನ್ನು ಸಾಲದ ಶೂಲಕ್ಕೆ ಸಿಲುಕಿಸಿಬೇಡಿ.

ಆರಂಭದಿಂದಲೇ ಚೆನ್ನಾಗಿ ಓದಿ ಉಚಿತ ಅವಕಾಶಗಳನ್ನು ಪಡೆಯಬೇಕು. ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವ ವಿದ್ಯಾರ್ಥಿಗಳಿಗೆ ನೆರುವು ನೀಡಲು ಅನೇಕ ಸ್ವಯಂ ಸೇವಾ ಸಂಸ್ಥೆಗಳು ವ್ಯಕ್ತಿಗಳು ಮುಂದೆ ಬರುತ್ತಿದ್ದು ಸದ್ಬಳಕೆ ಮಾಡಿಕೊಳ್ಳಬೇಕಿದೆ ಎಂದರು.
ಶಾಲೆ, ದೇಗುಲ ಗ್ರಾಮದ ಬೀದಿಗಳ ಸ್ವಚ್ಚತೆ ಸೇರಿದಂತೆ ಜಂಬೂಸವಾರಿ ದಿಣ್ಣೆ ಸ್ಥಳ ಸ್ವಚ್ಚತೆ ಮಾಡಿರುವ ಶಿಬಿರಾರ್ಥಿಗಳ ಕೆಲಸ ಶ್ಲಾಘನೀಯ ಎಂದು ನಗರಸಭೆ ಹೆಚ್ಚುವರಿ ಸದಸ್ಯ ಕೃಪಾನಂದ್ ತಿಳಿಸಿದರು.
ನೆನಪಿನ ಕಾಣಿಕೆ ಪ್ರಮಾಣ ಪತ್ರವಿತರಣೆ. ಸಮಾರೋಪ ಸಮಾರಂಭದಲ್ಲಿ ಶಿಬಿರದಲ್ಲಿ ಭಾಗವಹಿಸಿದ್ದ ಸುಮಾರು 57 ಮಂದಿ ವಿದ್ಯಾರ್ಥಿಗಳಿಗೆ ನೆನಪಿನ ಕಾಣಿಕೆ ಹಾಗೂ ಪ್ರಮಾಣ ಪತ್ರ ವಿತರಣೆ ಮಾಡಿ ಗೌರವಿಸಲಾಯಿತು.

ಸಂದರ್ಭದಲ್ಲಿ ಕರವೇ ರಾಜ್ಯ ಉಪಾಧ್ಯಕ್ಷ ಜಿ.ಉಮೇಶ್‌ಗೌಡ, ನಗರಸಭೆ ನಾಮ ನಿರ್ದೇಶಿತ ಮಾಜಿ ಸದಸ್ಯ ಕೆ.ವಸಂತ್, ವಕೀಲ ವಸಂತ್, ಶಿಬಿರಾಧಿಕಾರಿ ಮಾರುತಿ, ಉಪನ್ಯಾಸಕ ವೀರ ಭದ್ರಯ್ಯ, ಚೈತನ್ಯ, ಹಿರಿಯ ವಿದ್ಯಾರ್ಥಿ ಅನಂತ್‌ಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

28 ನೆಲಪಿಎಚ್ 02 ಪ್ರಮಾಣಪತ್ರ ವಿತರಣೆ: ನೆಲಮಂಗಲ ನಗರಸಭೆ ವ್ಯಾಪ್ತಿಯ ಬಸವನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮುರುಳಿ ಪದವಿಪೂರ್ವ ಕಾಲೇಜು ಆಯೋಜಿಸಿದ್ದ ಎನ್.ಎಸ್.ಎಸ್. ಶಿಬಿರದ ಸಮಾರೋಪ ಸಮಾರಂಭ ನಗರಸಭೆ ಅದ್ಯಕ್ಷ ಎನ್.ಗಣೇಶ್ ವಿದ್ಯಾರ್ಥಿಗಳಿಗೆ ನೆನಪಿನ ಕಾಣಿಕೆ ಹಾಗೂ ಪ್ರಮಾಣಪತ್ರ ನೀಡಿ ಗೌರವಿಸಿದರು. ಮಾಜಿ ಸೈನಿಕ ಮಿಲಿಟರಿಮೂರ್ತಿ ಮತ್ತಿತರರು ಇದ್ದರು.

# ಗುಣಮಟ್ಟದ ವಸ್ತುಗಳವ್ಯಾಪಾರ ವ್ಯವಹಾರ ನೆಡೆಸಿದರೆ ಯಶಸ್ಸು ಸಾಧ್ಯ: ನಿಶ್ಚಲಾನಂದ ಶ್ರೀ

ಕೆ. ಆರ್. ಪೇಟೆ: ಜಾಗತಿಕ ಜಗತ್ತಿನ ಇಂದಿನ ಸ್ಪರ್ಧಾ ಪ್ರಪಂಚದಲ್ಲಿ ಮಾರುಕಟ್ಟೆಯ ದರಕ್ಕೆ ಪೈಪೋಟಿಯಾಗಿ ನಾವು ಕಡಿಮೆ ಬೆಲೆಯಲ್ಲಿ ಗುಣಮಟ್ಟದ ವಸ್ತುಗಳ ವ್ಯಾಪಾರ, ವ್ಯವಹಾರವನ್ನು ನಡೆಸಿದರೆ ಮಾತ್ರ ಮಾರುಕಟ್ಟೆಯಲ್ಲಿ ಮುನ್ನುಗ್ಗಿ ಯಶಸ್ಸನ್ನು ಗಳಿಸಲು ಸಾಧ್ಯವಿದೆ ಎಂದು ವಿಶ್ವ ಒಕ್ಕಲಿಗರ ಮಹಾ ಸಂಸ್ಥಾನ ಮಠದ ಪೀಠಾಧಿಪತಿಗಳಾದ ಡಾ. ನಿಶ್ಚಲಾನಂದನಾಥ ಸ್ವಾಮೀಜಿ ಹೇಳಿದರು,

ಪಟ್ಟಣದ ಪುನೀತ್ ರಾಜಕುಮಾರ್ ರಸ್ತೆಯಲ್ಲಿ ವಿದ್ಯಾವಂತ ನಿರುದ್ಯೋಗಿ ಯುವಕ ನವೀನ್ ಅವರು ನೂತನವಾಗಿ ಆರಂಭಿಸಿರುವ ಪುನರ್ವಿಕ ಫರ್ನಿಚರ್, ಎಲೆಕ್ಟ್ರಾನಿಕ್, ಹಾಗೂ ಗೃಹೋಪಯೋಗಿ ವಸ್ತುಗಳ ಮಾರಾಟ ಮಳಿಗೆಯನ್ನು ಉದ್ಘಾಟಿಸಿ ಮಾತನಾಡಿದ ಅವರು ಜಾಗತಿಕ ಜಗತ್ತಿನ ಹಿಂದಿನ ಸ್ಪರ್ಧಾ ಪ್ರಪಂಚದಲ್ಲಿ ವಿಶ್ವದಾದ್ಯಂತ ನಡೆಸುವ ವ್ಯಾಪಾರ ವ್ಯವಹಾರಗಳು ನಮ್ಮ ಅಂಗೈ ಅಗಲದಲ್ಲಿಯೇ ವ್ಯಾಟ್ಸಪ್, ಇನ್ಸ್ಟಾಗ್ರಾಮ್ ಹಾಗೂ ಗೂಗಲ್ ಮೂಲಕ ಆನ್ಲೈನ್ ನಲ್ಲಿಯೇ ನಡೆಯುತ್ತಿರುವುದರಿಂದ ಇಂದು ಗ್ರಾಹಕರು ಜಾಗರೂಕರಾಗಿದ್ದಾರಲ್ಲದೆ ಬುದ್ಧಿವಂತರಾಗಿದ್ದಾರೆ.



ಆದ್ದರಿಂದ ನಾವು ಮಾರುಕಟ್ಟೆಯ ಸವಾಲುಗಳನ್ನು ಎದುರಿಸಿ ನಮ್ಮ ವ್ಯಾಪಾರ ವ್ಯವಹಾರದಲ್ಲಿ ಯಶಸ್ವಿಯಾಗಬೇಕಾದರೆ ನಾವು ಮಾರಾಟ ಮಾಡುವ ವಸ್ತುಗಳು ಹಾಗೂ ಉತ್ಪನ್ನಗಳು ಗುಣಮಟ್ಟದ್ದಾಗಿರಬೇಕಲ್ಲದೆ, ಸ್ಪರ್ಧಾತ್ಮಕ ದರದಲ್ಲಿ ಶ್ರೀಸಾಮಾನ್ಯರ ಕೈಗೆಟುಕುವಂತಿರಬೇಕು. ಆದ್ದರಿಂದ ವಿದ್ಯಾವಂತ ನಿರುದ್ಯೋಗ ಯುವಕರಾಗಿರುವ ನವೀನ್ ಅವರು ಪುನರ್ವಿಕ ಮಾರಾಟ ಮಳಿಗೆಯನ್ನು ಸ್ಥಾಪಿಸಿ ನೂರಾರು ನಿರುದ್ಯೋಗಿ ಯುವ ಜನರಿಗೆ ಉದ್ಯೋಗವನ್ನು ನೀಡುತ್ತಿರುವುದಲ್ಲದೇ, ಇಂದಿನ ಜಾಗತಿಕ ಜಗತ್ತಿನ ಸವಾಲುಗಳನ್ನು ಎದುರಿಸುವ ದಿಕ್ಕಿನಲ್ಲಿ ಪೂರಕವಾಗಿ ತಯಾರಿಯನ್ನು ಮಾಡಿಕೊಂಡು ಮಾರುಕಟ್ಟೆ ದರಕ್ಕಿಂತ ಅತ್ಯಂತ ಕಡಿಮೆ ದರದಲ್ಲಿ ತಮ್ಮ ಮಾರಾಟ ಮಳಿಗೆಯಲ್ಲಿ ವಿವಿಧ ಬ್ರಾಂಡ್ ಗಳ ಗುಣಮಟ್ಟದ ಉತ್ಪನ್ನಗಳನ್ನು ಮಾರಾಟ ಮಾಡುತ್ತಿರುವುದರಿಂದ ನವೀನ್ ಅವರ ಉದ್ಯಮಕ್ಕೆ ಅಪಾರವಾದ ಯಶಸ್ಸು ದೊರೆಯಲಿದೆ.

ಆದ್ದರಿಂದ ಇಂದಿನ ಸ್ಪರ್ಧಾತ್ಮಕ ಜಗತ್ತಿನ ಮಾರುಕಟ್ಟೆಯಲ್ಲಿ ಎದುರಾಗುವ ಸವಾಲುಗಳನ್ನು ಆತ್ಮವಿಶ್ವಾಸ ಹಾಗೂ ತಂತ್ರಜ್ಞಾನದ ಉತ್ಪನ್ನಗಳ ಮೂಲಕ ಎದುರಿಸಿ ಗುರಿ ಮುಟ್ಟುವ ದಿಕ್ಕಿನಲ್ಲಿ ಮಾರುಕಟ್ಟೆಯ ಒಳ ಹೊರವು ಗಳನ್ನು ತಿಳಿದುಕೊಂಡು ತಾವು ಪ್ರವೇಶಿಸಿರುವ ಎಲೆಕ್ಟ್ರಾನಿಕ್ಸ್, ಫರ್ನಿಚರ್ ಹಾಗೂ ಮೊಬೈಲ್ ಮಾರಾಟ ಕ್ಷೇತ್ರದಲ್ಲಿ ಯಶಸ್ಸನ್ನು ಸಾಧಿಸಿ ಮುನ್ನಡೆಯಲ್ಲಿ ಎಂದು ನಿಶ್ಚಲಾನಂದನಾಥ ಸ್ವಾಮೀಜಿ ಶುಭ ಕೋರಿದರು. ಕೃಷ್ಣರಾಜಪೇಟೆ ಶಾಸಕ ಎಚ್.ಟಿ. ಮಂಜು ಅವರು ಟೇಪ್ ಕತ್ತರಿಸುವ ಮೂಲಕ ಪುನರ್ವಿಕ ಎಲೆಕ್ಟ್ರಾನಿಕ್ಸ್ ಫರ್ನಿಚರ್ ಹಾಗೂ ಮೊಬೈಲ್ ಮಾರಾಟ ಮಳಿಗೆಯನ್ನು ಲೋಕಾರ್ಪಣೆಗೊಳಿಸಿ ಮಾತನಾಡಿ ಮಾರುಕಟ್ಟೆಯಲ್ಲಿ ಇಂದು ಬಹಳ ಬೇಡಿಕೆಯನ್ನು ಹೊಂದಿರುವ ಎಲೆಕ್ಟ್ರಾನಿಕ್ಸ್ ಉತ್ಪನ್ನಗಳ ಮಾರಾಟಕ್ಕೆ ನವೀನ್ ಕೈ ಹಾಕಿರುವುದು ಅವರ ಯಶಸ್ಸಿಗೆ ಮುನ್ನುಡಿ ಬರೆದಂತಿದೆ.

ಪುನರ್ವಿಕ ಸಂಸ್ಥೆಯು ಬೆಳೆದು ಹೆಮ್ಮರ ವಾಗುವ ಜೊತೆಗೆ ನೂರಾರು ನಿರುದ್ಯೋಗಿ ಯುವ ಜನರಿಗೆ ಉದ್ಯೋಗವನ್ನು ನೀಡುವ ಮೂಲಕ ಅವರ ಬಾಳಿಗೆ ಬೆಳಕಾಗಲಿದೆ ಎಂದು ಶುಭ ಕೋರಿದರು.
ಮಾಜಿ ಶಾಸಕ ಕೆ.ಬಿ. ಚಂದ್ರಶೇಖರ್, ಮಂಡ್ಯ ಹಾಲು ಉತ್ಪನ್ನ ಒಕ್ಕೂಟದ ಮಾಜಿ ಅಧ್ಯಕ್ಷ ಮಡುವಿನಕೋಡಿ ಹರೀಶ್, ನಿರ್ದೇಶಕರಾದ ಡಾಲು ರವಿ, ಮಾಜಿ ಶಾಸಕರಾದ ಬಿ. ಪ್ರಕಾಶ್, ಮಂಡ್ಯ ಜಿಲ್ಲಾ ಹಾಪ್ ಕಾಮ್ಸ್ ಮಾಜಿ ಅಧ್ಯಕ್ಷ ಕೆ.ಜಿ. ತಮ್ಮಣ್ಣ, ಪುರಸಭೆ ಅಧ್ಯಕ್ಷೆ ಪಂಕಜಾ ಪ್ರಕಾಶ್, ಮುಖ್ಯಾಧಿಕಾರಿ ಅಶೋಕ್, ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಪೂರ್ಣಚಂದ್ರ ತೇಜಸ್ವಿ ಮಾಜಿ ಅಧ್ಯಕ್ಷರಾದ ಎಂ. ಕೆ.ಹ–ರಿಚರಣತಿಲಕ್, ಕೆ.ಆರ್. ನೀಲಕಂಠ, ಬಳ್ಳೇಕೆರೆ ಮಂಜುನಾಥ್ ರಾಜ್ಯ ಆರ್‌ಟಿಓ ಅಧಿಕಾರಿಗಳ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ, ಕೃಷ್ಣರಾಜಪೇಟೆ ತಾಲೂಕು ವಿತರಕರ ಸಂಘದ ಅಧ್ಯಕ್ಷ ಕೆ.ಎಸ್. ರಾಜೇಶ್, ಪುರಸಭೆ ಮಾಜಿ ಸ್ಥಾಯಿ ಸಮಿತಿ ಅಧ್ಯಕ್ಷ ಎಚ್.ಆರ್.ಲೋಕೇಶ್, ಉದ್ಯಮಿ ಹೆಚ್. ಆರ್. ಸೋಮಣ್ಣ, ಡಿಂಕಾ ಮಹೇಶ್ ಸೇರಿದಂತೆ ನೂರಾರು ಜನರು ಪುನರ್ವಿಕ ಎಲೆಕ್ಟ್ರಾನಿಕ್ಸ್ ಉತ್ಪನ್ನಗಳ ಮಾರಾಟ ಮಳಿಗೆಯ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಮೈತ್ರಿ ಅಭ್ಯರ್ಥಿಗಳು ಗೆಲುವು ಹಾರನಹಳ್ಳಿ ಪ್ರಭಾಕರ್

ಗುಬ್ಬಿ: ತಾಲ್ಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘದ ಆಡಳಿತ ಮಂಡಳಿ ನಿರ್ದೇಶಕರ ಆಯ್ಕೆ ಚುನಾವಣೆಯಲ್ಲಿ ಒಟ್ಟು 13 ಸ್ಥಾನದ ಪೈಕಿ 8 ನಿರ್ದೇಶಕರ ಅವಿರೋಧ ಆಯ್ಕೆಯಾಗಿ ಉಳಿದ 5 ಸ್ಥಾನಕ್ಕೆ ನಡೆದ ಮತದಾನ ಪ್ರಕ್ರಿಯೆಯಲ್ಲಿ ಕೆಎನ್ ರಾಜಣ್ಣ ಬಣದ ಐದು ಮಂದಿ ಬಹುಮತದಿಂದ ಗೆಲುವು ಸಾಧಿಸಿದರೆ ಎಂದು ಹಾರನಹಳ್ಳಿ ಪ್ರಭಾಕರ್ ತಿಳಿಸಿದರು.

ಚುನಾವಣಾ ಪ್ರಕ್ರಿಯೆಯನ್ನು ಸಹಕಾರ ಇಲಾಖೆಯ ಕೆ.ಎಚ್.ಮಹಂತೇಶಯ್ಯ ನಡೆಸಿಕೊಟ್ಟರು. ಟಿಎಪಿಎಂಎಸ್ ಕಟ್ಟಡದಲ್ಲಿ ನಡೆದ ಮತದಾನ ಪ್ರಕ್ರಿಯೆ ಬೆಳಿಗ್ಗೆ 8 ರಿಂದ ಸಂಜೆ 4 ರವರೆಗೆ ಮತದಾನ ಪ್ರಕ್ರಿಯೆ ನಡೆಸಿ ನಂತರ ಮತ ಎಣಿಕೆ ಕಾರ್ಯ ನಡೆಸಲಾಯಿತು.
ಡಿಸಿಸಿ ಬ್ಯಾಂಕ್ ನಿರ್ದೇಶಕ ಹಾರನಹಳ್ಳಿ ಪ್ರಭಣ್ಣ ಮಾತನಾಡಿ ಸಹಕಾರ ಕ್ಷೇತ್ರದಲ್ಲಿ ರಾಜಕೀಯ ಬೆರೆಯಬಾರದಿತ್ತು. ಸಾರ್ವತ್ರಿಕ ಚುನಾವಣೆ ರೀತಿ ಇಂದು ನಡೆದಿದೆ. ಪಕ್ಷಾತೀತ ನಿಲುವು ಸಹಕಾರ ಕ್ಷೇತ್ರದಲ್ಲಿ ಮೊದಲಿನಿಂದಲೂ ಕಂಡಿದೆ. ಆದರೆ ಈ ಬಾರಿ ದೊಡ್ಡ ರಾಜಕಾರಣಿಗಳ ಎಂಟ್ರಿ ಮಾಡಬಾರದಿತ್ತು. ಮತದಾರರ ಮನಸ್ಸು ಗೆದ್ದ ನಮ್ಮ ಮೈತ್ರಿ ಅಭ್ಯರ್ಥಿಗಳ ತಂಡ ಐದೂ ಸ್ಥಾನ ಪಡೆದುಕೊಂಡಿದೆ. ಈ ಗೆಲುವಿಗೆ ನಮ್ಮ ಕೆ.ಎನ್.ರಾಜಣ್ಣ ಹಾಗೂ ಆರ್.ರಾಜೇಂದ್ರ ಅವರ ಮಾರ್ಗದರ್ಶನದಲ್ಲಿ ನಡೆದಿದೆ ಎಂದರು.

ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಜಿ.ಡಿ.ಸುರೇಶಗೌಡ ಮಾತನಾಡಿ ಹಾರನಹಳ್ಳಿ ಪ್ರಭಣ್ಣ ಅವರ ನೇತೃತ್ವದಲ್ಲಿ ನಮ್ಮ ಸಿಂಡಿಕೇಟ್ ಮತದಾರರಿಗೆ ಹತ್ತಿರವಾಗಿದೆ. ಬಹುಮತದಿಂದ ಗೆಲ್ಲಿಸಿದ ಮತದಾರರಿಗೆ ನಮ್ಮ ಧನ್ಯವಾದಗಳು. ಸಂಘವನ್ನು ಅಭಿವೃದ್ಧಿ ಪಡಿಸುವ ಜೊತೆಗೆ ಈ ಗೆಲುವನ್ನು ಕೆ.ಎನ್.ರಾಜಣ್ಣ ಅವರಿಗೆ ಅರ್ಪಿಸುತ್ತೇವೆ ಎಂದರು. ನೂತನ ನಿರ್ದೇಶಕ ಬಿ.ಎಸ್.ಪಂಚಾಕ್ಷರಿ ಮಾತನಾಡಿ ಪ್ರಭಣ್ಣ ಅವರ ಮಾರ್ಗದರ್ಶನದಲ್ಲಿ ನಮ್ಮ ತಂಡ ಐದೂ ಮಂದಿ 600 ಕ್ಕೂ ಅಧಿಕ ಮತಗಳನ್ನು ಪಡೆದು ಭರ್ಜರಿ ಗೆಲುವು ಸಾಧಿಸಿದ್ದಾರೆ. ಗೆಲುವಿಗೆ ಕಾರಣ–ರಾದ ಮತದಾರರಿಗೆ ಧನ್ಯವಾದಗಳು ಅರ್ಪಿಸುತ್ತೇವೆ ಎಂದರು.

ಟಿಎಪಿಸಿಎಂಎಸ್ ನೂತನ ನಿರ್ದೇಶಕ ಎನ್.ಸಿ.ಗಿರೀಶ್ ಮಾತನಾಡಿ 13 ಸ್ಥಾನದಲ್ಲಿ 8 ಸ್ಥಾನ ಅವಿರೋಧ ಆಯ್ಕೆಯಾಗಿತ್ತು. ಉಳಿದ 5 ಸ್ಥಾನಕ್ಕೆ ಅನಿವಾರ್ಯ ಮತದಾನ ಪ್ರಕ್ರಿಯೆ ಎದುರಾಯಿತು. ಪ್ರಭಣ್ಣ ಅವರ ನೇತೃತ್ವದಲ್ಲಿ ನಮ್ಮ ಐದು ಜನರ ಸಿಂಡಿಕೇಟ್ ಮತದಾರರ ಮನಸ್ಸು ಗೆದ್ದಿದೆ. ಟಿಎಪಿಸಿಎಂ–ಎಸ್ ಅಭಿವೃದ್ಧಿಗೆ ಎಲ್ಲಾ ಸದಸ್ಯರ ಜೊತೆ ಶ್ರಮಿಸುತ್ತೇವೆ ಎಂದರು. ಈ ಸಂದರ್ಭದಲ್ಲಿ ಪ ಪಂ ಸದಸ್ಯರಾದ ಕೃಷ್ಣಮೂರ್ತಿ, ಜೆಡಿಎಸ್ ಮುಖಂಡ ಬಿ ಎಸ್ ನಾಗರಾಜ, ಕಳ್ಳಿಪಾಳ್ಯ ಲೋಕೇಶ್, ಸುರೇಶ್ ಗೌಡ, ಜೆಡಿಎಸ್ ಮತ್ತು ಬಿಜೆಪಿ ಮುಖಂಡರು ಹಾಜರಿದ್ದರು.



# ರೇಬಿಸ್ ಬಗ್ಗೆ ಜಾಗೃತಿ ಕಾರ್ಯಕ್ರಮ ಆಯೋಜಿಸಿದ ಪಶು ಸಂಗೋಪನಾ ಇಲಾಖೆ

ಗುಬ್ಬಿ: ರೇಬಿಸ್ ವೈರಾಣು ಬಗ್ಗೆ ಜನಜಾಗೃತಿ ಹಾಗೂ ಉಚಿತ ಲಸಿಕೆ ಅಭಿಯಾನ ಕಾರ್ಯಕ್ರಮವನ್ನು ಸೋಮವಾರ ಪಶು ಸಂಗೋಪನಾ ಇಲಾಖೆ ಆಯೋಜಿಸಿ ಸಾಕು ನಾಯಿ, ಬೆಕ್ಕುಗಳು ಹಾಗೂ ಬೀದಿ ನಾಯಿಗಳಿಗೆ ಉಚಿತ ಲಸಿಕೆ ನೀಡಿದರು.

ಪಟ್ಟಣ ಪಂಚಾಯತಿ ಅಧ್ಯಕ್ಷೆ ಆಯಿಷಾ ತಾಸೀನ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ಗುಬ್ಬಿ ನ್ಯಾಯಾಲಯದಲ್ಲಿ ಓರ್ವ ಮಹಿಳೆ ಮೇಲೆ ನಾಯಿ ದಾಳಿ ನಡೆಸಿ ತೀವ್ರ ಗಾಯಗೊಳಿಸಿತ್ತು. ಈ ಹಿನ್ನಲೆ ವ್ಯಾಪಕ ಚರ್ಚೆ ನಡೆದು ಬೀದಿ ನಾಯಿಗಳಿಗೆ ವ್ಯಾಕ್ಸಿನ್ ಹಾಗೂ ಎಬಿಸಿ ಶಸ್ತ್ರ ಚಿಕಿತ್ಸೆಗೆ ಹಣ ಮೀಸಲಿಟ್ಟು ಈಗಾಗಲೇ ನಾಯಿಗಳಿಗೆ ಲಸಿಕೆ ಹಾಕಿಸಲಾಗುತ್ತಿದೆ. ಈ ನಿಟ್ಟಿನಲ್ಲಿ ಪಶು ಇಲಾಖೆ ಸಾಕಷ್ಟು ಸಹಕಾರ ನೀಡಿದೆ ಎಂದರು. ಪಪಂ ಸದಸ್ಯ ಜಿ.ಆರ್.ಶಿವಕುಮಾರ್ ಮಾತನಾಡಿ ಬೀದಿ ನಾಯಿಗಳ ಹಾವಳಿಗೆ ನಾಗ–ರೀಕರ ತಾಳ್ಮೆ ಕೆಟ್ಟಿತ್ತು. ನಾಯಿಗಳ ಸಂಖ್ಯೆ ಗಣತಿ ನಡೆಸಿ ಪಟ್ಟಣದಲ್ಲಿನ ಎಲ್ಲಾ ಬಡಾವಣೆಗಳಲ್ಲಿ ನಾಯಿಗಳ ಹಿಡಿದು ಅದಕ್ಕೆ ಶೆಲ್ಟರ್ ಒದಗಿಸಿ ನೀರು ಆಹಾರ ಹಾಕಲಾಗಿದೆ.

ರೇಬಿಸ್ ರೋಗದ ಬಗ್ಗೆ ಜನರು ಎಚ್ಚರಿಕೆ ವಹಿಸಬೇಕಿದೆ. ಸಾಕು ನಾಯಿ ಅಥ–'ವಾ ಬೆಕ್ಕು ಸಾಕಾಣಿಕೆ ಖುಷಿ ಕೊಡುತ್ತದೆ. ಆದರೆ



ಸ್ವಲ್ಪ ಎಚ್ಚರಿಕೆ ವಹಿಸಿ ಪ್ರತಿ ವರ್ಷ ವ್ಯಾಕ್ಸಿನ್ ಕೊಡಿಸಬೇಕು ಎಂದ ಅವರು ಲಯನ್ಸ್ ಸಂಸ್ಥೆ ಈ ಅಭಿಯಾನಕ್ಕೆ ಕೈ ಜೋಡಿಸಿದೆ ಎಂದರು.
ಶ್ವಾನ ಪ್ರಿಯ ಜಿ.ಆರ್.ರಮೇಶಗೌಡ ಮಾತನಾಡಿ ನಾಯಿಗಳು ಮನುಷ್ಯನ ಸಹಪಾಠಿ. ನಿಯತ್ತಿನ ಪ್ರಾಣಿ ನಾಯಿ ಮನುಷ್ಯನಿಗೆ ತೋರುವ ಪ್ರೀತಿ ಅಪಾರ. ಒಂದು ದಿನ ಆಹಾರ ನೀಡಿದರೆ ಪ್ರಾಣ ನೀಡುವವರೆಗೆ ನಿಯತ್ತು ತೋರುತ್ತದೆ. ರೇಬಿಸ್ ವೈರಾಣು ನಾಯಿಗಳಲ್ಲಿ ಕಾಣುವ ಮುನ್ನ ವ್ಯಾಕ್ಸಿನ್ ಪ್ರತಿ ವರ್ಷ ಹಾಕಿಸುವುದು ಸೂಕ್ತ. ಇದರ ಜೊತೆಗೆ ಮನೆಯ ಸದಸ್ಯರು ವ್ಯಾಕ್ಸಿನ್ ಪಡೆದುಕೊಳ್ಳುವುದು ಇನ್ನೂ ಉತ್ತಮ ಎಂದರು. ಪಶು ಇಲಾಖೆ ಸಹಾಯಕ ನಿರ್ದೇಶಕ ಡಾ.ಸುರೇಶ್ ಮಾತನಾಡಿ ರೇಬಿಸ್ ವೈರಾಣು ಮನುಷ್ಯನ ಮೆದುಳಿಗೆ ತಲುಪಿದರೆ ಹುಚ್ಚು ಹಿಡಿದು ಸಾವು ಖಚಿತವಾಗುತ್ತದೆ.

ಈ ಹಿನ್ನಲೆ ನಾಯಿಗಳು ಕಡಿದರೆ ಆ ಜಾಗವನ್ನು ಇಪ್ಪತ್ತು ನಿಮಿಷಗಳ ಕಾಲ ಸೋಪಿನಿಂದ ತೊಳೆಯಬೇಕು. ನಂತರ ಆಸ್ಪತ್ರೆಯಲ್ಲಿ ಲಸಿಕೆ ಪಡೆಯಬೇಕು. ಈ ಜತೆಗೆ ಬೀದಿ ನಾಯಿಗಳಿಗೆ ವ್ಯಾಕ್ಸಿನ್ ಕೊಡುವ ಆಲೋಚನೆ ಮಾಡಿದ ಸ್ಥಳೀಯ ಪಟ್ಟಣ ಪಂಚಾಯಿತಿ ನಾಯಿಗಳನ್ನು ಹಿಡಿದು ಅದಕ್ಕೆ ಉತ್ತಮ ಸೌಲಭ್ಯ ನೀಡಿರುವುದು ರಾಜ್ಯದಲ್ಲೇ ಉತ್ತಮ ಎನಿಸಿದೆ ಎಂದರು. ಕಾರ್ಯಕ್ರಮದಲ್ಲಿ ನಾಯಿಗಳಿಗೆ ವ್ಯಾಕ್ಸಿನ್ ನೀಡಿ ಅತ್ಯುತ್ತಮವಾಗಿ ಆರೋಗ್ಯವಾಗಿ ಸಾಕಿರುವ ನಾಯಿಗಳಿಗೆ ಬಹುಮಾನ ನೀಡಿದರು. ಗುಬ್ಬಿಯ ಚನ್ನಬಸವಣ್ಣ ಸಾಕಿರುವ ಸೋನು ಎಂಬ ನಾಯಿ ಪ್ರಥಮ ಸ್ಥಾನ ಪಡೆಯಿತು. ನಂತರ ಪಟ್ಟಣ ಪಂಚಾಯಿತಿ ಹಿಡಿದ ನಾಯಿಗಳಿಗೆ ವ್ಯಾಕ್ಸಿನ್ ಹಾಕಲಾಯಿತು. ಕಾರ್ಯಕ್ರಮದಲ್ಲಿ ಪಪಂ ಸದಸ್ಯ ಮಹಮ್ಮದ್ ಸಾದಿಕ್, ಲಯನ್ಸ್ ಕ್ಲಬ್ ಅಧ್ಯಕ್ಷ ಕುಮಾರಸ್ವಾಮಿ, ಪಪಂ ಮುಖ್ಯಾಧಿಕಾರಿ ಮಂಜುಳಾದೇವಿ ಸೇರಿದಂತೆ ಪಶು ಇಲಾಖೆಯ ಎಲ್ಲಾ ಸಿಬ್ಬಂದಿಗಳು ಇತರರು ಇದ್ದರು.

# ಸೇವಾ ಮನೋಭಾವನೆಯನ್ನು ಬೆಳೆಸುವಲ್ಲಿ ಎನ್.ಎಸ್.ಎಸ್ ಶಿಬಿರಗಳು ಸಹಕಾರಿಯಾಗಲಿದೆ ಎಂದು ನಗರಸಭೆ ಅಧ್ಯಕ್ಷ ಎನ್.ಗಣೇಶ್ ಅಭಿಪ್ರಾಯ ಪಟ್ಟರು

ನೆಲಮಂಗಲ: ನಗರಸಭೆ ವ್ಯಾಪ್ತಿಯ ಬಸವನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮುರುಳಿ ಪದವಿಪೂರ್ವ ಕಾಲೇಜು ಆಯೋಜಿಸಿದ್ದ ಎನ್.ಎಸ್.ಎಸ್. ಶಿಬಿರದ ಸಮಾರೋಪ ಸಮಾರಂಭ ಉದ್ದೇಶಿಸಿ ಮಾತನಾಡಿದರು.

ಶಿಬಿರಗಳಲ್ಲಿ ಕಳೆದ ಸಮಯ ಮಾಡಿದ ಸೇವಾ ಕಾರ್ಯಗಳು ಭವಿಷ್ಯದ ಜೀವನದಲ್ಲಿ ಸದಾ ಸ್ಮರಣೀಯವಾಗಿ ಉಳಿಯಲಿದೆ. ನಗರಸಭೆಯಿಂದ ಮಾಡಬೇಕಾದ ಕೆಲಸಗಳನ್ನು ಶಿಬಿರಾರ್ಥಿಗಳು ಮಾಡಿರುವುದು ಸಂತೋಷಕರ ಸಂಗತಿ. ಜನಸಾಮಾನ್ಯರಲ್ಲಿ ಸ್ವಚ್ಚತೆ ಹಾಗೂ ಸೇವಾ ಕಾರ್ಯಗಳ ಅರಿವು ಮೂಡಿಸಲು ಸಹಕಾರಿಯಾಗಲಿದೆ ಎಂದರು. ಮಾಜಿ ಸೈನಿಕ ಮಿಲಿಟರಿಮೂರ್ತಿ ಮಾತನಾಡಿ ವಿದ್ಯಾರ್ಥಿಗಳು ವೈಯಕ್ತಿಕ ಶಿಸ್ತು ಕುಟುಂಬದಲ್ಲಿನ ಪಾಲಕರು ಗುರುಹಿರಿಯರಿಗೆ ಗೌರವ ಕೊಡಬೇಕು.




ಪಠ್ಯದ ವಿಷಯಗಳನ್ನು ಚೆನ್ನಾಗಿ ಅಧ್ಯಯನ ಮಾಡಬೇಕು. ಕಷ್ಟಪಟ್ಟು ಅಧ್ಯಯನ ಮಾಡಿದಲ್ಲಿ ಭವಿಷ್ಯದಲ್ಲಿ ಸುಖ ಶಾಂತಿ ಸಮೃದ್ಧಿಯಿಂದ ಬದುಕಬಹುದಾಗಿದೆ. ಇಲ್ಲವಾದಲ್ಲಿ ಅಂದಕೊಂಡಂತೆ ಬದುಕಲು ಆಗುವುದಿಲ್ಲ. ಸಮಯ ವ್ಯರ್ಥ ಮಾಡಬೇಡಿ. ಭಾರತೀಯ ಇತಿಹಾಸ, ಸಂಸ್ಕೃತಿಯನ್ನು ತಿಳಿದುಕೊಳ್ಳಬೇಕು. ಸ್ಪರ್ಧಾತ್ಮಕ ಜಗತ್ತಿಗೆ ಅಣಿಯಾಗುವ ಬಹುದೊಡ್ಡ ಜವಬ್ದಾರಿ ಪ್ರತಿಯೊಬ್ಬ ವಿದ್ಯಾರ್ಥಿ ಮೇಲಿದೆ. ಇಂಜಿನಿಯ–ರಿಂಗ್, ಮೆಡಿಕಲ್ ಓದಲು ಕೋಟಿ ಕೋಟಿ ಹಣ ಬೇಕಿದೆ. ಪಾಲಕರನ್ನು ಸಾಲದ ಶೂಲಕ್ಕೆ ಸಿಲುಕಿಸಿಬೇಡಿ. ಆರಂಭದಿಂದಲೇ ಚೆನ್ನಾಗಿ ಓದಿ ಉಚಿತ ಅವಕಾಶಗಳನ್ನು ಪಡೆಯಬೇಕು.

ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದು–ರಿಸುವ ವಿದ್ಯಾರ್ಥಿಗಳಿಗೆ ನೆರುವು ನೀಡಲು ಅನೇಕ ಸ್ವಯಂ ಸೇವಾ ಸಂಸ್ಥೆಗಳು ವ್ಯಕ್ತಿಗಳು ಮುಂದೆ ಬರುತ್ತಿದ್ದು ಸದ್ಬಳಕೆ ಮಾಡಿಕೊಳ್ಳಬೇಕಿದೆ ಎಂದರು.
ಶಾಲೆ, ದೇಗುಲ ಗ್ರಾಮದ ಬೀದಿಗಳ ಸ್ವಚ್ಚತೆ ಸೇರಿದಂತೆ ಜಂಬೂಸವಾರಿ ದಿಣ್ಣೆ ಸ್ಥಳ ಸ್ವಚ್ಚತೆ ಮಾಡಿರುವ ಶಿಬಿರಾರ್ಥಿಗಳ ಕೆಲಸ ಶ್ಲಾಘನೀಯ ಎಂದು ನಗರಸಭೆ ಹೆಚ್ಚುವರಿ ಸದಸ್ಯ ಕೃಪಾನಂದ್ ತಿಳಿಸಿದರು. ನೆನಪಿನ ಕಾಣಿಕೆ ಪ್ರಮಾಣ ಪತ್ರವಿತರಣೆ. ಸಮಾರೋಪ ಸಮಾರಂಭದಲ್ಲಿ ಶಿಬಿರದಲ್ಲಿ ಭಾಗವಹಿಸಿದ್ದ ಸುಮಾರು 57 ಮಂದಿ ವಿದ್ಯಾರ್ಥಿಗಳಿಗೆ ನೆನಪಿನ ಕಾಣಿಕೆ ಹಾಗೂ ಪ್ರಮಾಣ ಪತ್ರ ವಿತರಣೆ ಮಾಡಿ ಗೌರವಿಸಲಾಯಿತು.

ಸಂದರ್ಭದಲ್ಲಿ ಕರವೇ ರಾಜ್ಯ ಉಪಾಧ್ಯಕ್ಷ ಜಿ.ಉಮೇಶ್‌ಗೌಡ, ನಗರಸಭೆ ನಾಮ ನಿರ್ದೇಶಿತ ಮಾಜಿ ಸದಸ್ಯ ಕೆ.ವಸಂತ್, ವಕೀಲ ವಸಂತ್, ಶಿಬಿರಾಧಿಕಾರಿ ಮಾರುತಿ, ಉಪನ್ಯಾಸಕ ವೀರ ಭದ್ರಯ್ಯ, ಚೈತನ್ಯ, ಹಿರಿಯ ವಿದ್ಯಾರ್ಥಿ ಅನಂತ್‌ಕುಮಾರ್ ಮತ್ತಿತರರು ಉಪಸ್ಥಿತರಿದ್ದರು.
28 ನೆಲಪಿಎಚ್ 02 ಪ್ರಮಾಣಪತ್ರ ವಿತರಣೆ: ನೆಲಮಂಗಲ ನಗರಸಭೆ ವ್ಯಾಪ್ತಿಯ ಬಸವನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥ–'ಮಿಕ ಶಾಲೆಯಲ್ಲಿ ಮುರುಳಿ ಪದವಿಪೂರ್ವ ಕಾಲೇಜು ಆಯೋಜಿಸಿದ್ದ ಎನ್.ಎಸ್.ಎಸ್. ಶಿಬಿರದ ಸಮಾರೋಪ ಸಮಾರಂಭ ನಗರಸಭೆ ಅದ್ಯಕ್ಷ ಎನ್.ಗಣೇಶ್ ವಿದ್ಯಾರ್ಥಿಗಳಿಗೆ ನೆನಪಿನ ಕಾಣಿಕೆ ಹಾಗೂ ಪ್ರಮಾಣಪತ್ರ ನೀಡಿ ಗೌರವಿಸಿದರು. ಮಾಜಿ ಸೈನಿಕ ಮಿಲಿಟರಿಮೂರ್ತಿ ಮತ್ತಿತರರು ಇದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.